ಕರ್ನಾಟಕ ಸರ್ಕಾರ
(ತಾಂತ್ರಿಕ ಶಿಕ್ಷಣ ಇಲಾಖೆ)

ಸಂಖ್ಯೆ: ಸಿಟಿಇ 06 ಡಿವಿಪಿ (1) 2023

ಆಯುಕ್ತರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು- 560 001.
ದಿನಾಂಕ: 02.06.2023

## ಅಧಿಕೃತ ಜ್ಞಾಪನ

**ವಿಷಯ:** 2023-24 ನೇ ಸಾಲಿನಲ್ಲಿ ಒದಗಿಸಲಾದ ಆಯವ್ಯಯದ ಮೊದಲನೇ ಕಂತಿನ ಅನುದಾನವನ್ನು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಿಗೆ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಇಡಿ 53 ಹೆಚ್‌ಪಿಟಿ 2023, ದಿನಾಂಕ 12.04.2023

*********

ಮೇಲೆ ನಮೂದಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ 2023-24 ನೇ ಆರ್ಥಿಕ ಸಾಲಿಗೆ ಶಿಕ್ಷಣ ಇಲಾಖೆಯ ಉನ್ನತ ಶಿಕ್ಷಣ ವಲಯದಡಿ ಬರುವ ತಾಂತ್ರಿಕ ಶಿಕ್ಷಣಕ್ಕೆ (ರಾಜ್ಯ ವಲಯ ಯೋಜನೆಗಳು) ಸಂಬಂಧಿಸಿದಂತೆ ಆಯವ್ಯಯದಲ್ಲಿನ ಯೋಜನಾ ಕಾರ್ಯಕ್ರಮಗಳಡಿ ಮುಂದುವರಿದ ಕಾರ್ಯಕ್ರಮಗಳನ್ನು ಮುಂದುವರಿಸಲು ಮತ್ತು ಅನುಷ್ಠಾನಗೊಳಿಸಲು ಅನುಮತಿ ನೀಡಿ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಿ ಸರ್ಕಾರ ಆದೇಶಿಸಿದೆ.

ಆದುದರಿಂದ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಿಗೆ ವಿವಿಧ ಉಪ ಶೀರ್ಷಿಕೆಗಳಲ್ಲಿ ಆಡಳಿತಾತ್ಮಕ ಉದ್ದೇಶಗಳಿಗೆ 2023-24 ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2203-00-103-0-01 ರಡಿ ಮೊದಲನೇ ಕಂತಿನ ಅನುದಾನವಗಿ 052-ದೂರವಾಣಿ ವೆಚ್ಚದಡಿ ರೂ. 60,000/- ಗಳನ್ನು ದೂರವಾಣಿ ವೆಚ್ಚ ಭರಿಸಲು ಮತ್ತು 071-ಕಟ್ಟಡ ವೆಚ್ಚದಡಿ ರೂ. 3,60,000/- ಗಳನ್ನು ವಿದ್ಯುತ್ ವೆಚ್ಚ, ಕಟ್ಟಡ ಬಾಡಿಗೆ ಹಾಗೂ ನೀರಿನ ವೆಚ್ಚ ಭರಿಸಲು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಆಡಳಿತಾತ್ಮಕ ಉದ್ದೇಶಗಳಿಗಾಗಿ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಲಾಗಿದೆ.

| ಕ್ರ ಸಂ | ಸಂಸ್ಥೆ | ಡಿಡಿಓ ಕೋಡ್ | 052-ದೂರವಾಣಿ ವೆಚ್ಚ | 071-ಕಟ್ಟಡ ವೆಚ್ಚ |
|---|---|---|---|---|
| 1 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಭದ್ರಾವತಿ | 332400 | 10,000 | 60,000 |
| 2 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಮಂಗಳೂರು | 332570 | 10,000 | 60,000 |
| 3 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಾಗಲಕೋಟೆ | 332770 | 10,000 | 60,000 |
| 4 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಹುಬ್ಬಳ್ಳಿ | 332970 | 10,000 | 60,000 |
| 5 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ,ಕಲಬುರ್ಗಿ | 333010 | 10,000 | 60,000 |
| 6 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಳ್ಳಾರಿ | 333050 | 10,000 | 60,000 |
| | **ಒಟ್ಟು** | | **60,000/-** | **3,60,000/-** |